ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಮೂರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 21ನೇ ಫೆಬ್ರವರಿ, 2014
(ಸಮಯ: ಬೆಳಗ್ಗೆ 10.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹತ್ತನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹತ್ತನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಸದಸ್ಯರಿಗೆ ಈಗಾಗಲೇ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೂರನೇ ಹಾಗೂ ನಾಲ್ಕನೇ ಪಟ್ಟಿಯ ರೀತ್ಯಾ.

3. ವರದಿಯನ್ನೊಪ್ಪಿಸುವುದು

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಅಧ್ಯಕ್ಷರು, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ) ಅವರು 2013-14ನೇ ಸಾಲಿನ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಮೊದಲನೇ ವರದಿಯನ್ನು ಒಪ್ಪಿಸುವುದು.

4. ವಿತ್ತೀಯ ಕಾರ್ಯಕಲಾಪಗಳು

2014-15ನೇ ಸಾಲಿನ ಆಯವ್ಯಯದ ಮೇಲೆ ಮುಂದುವರೆದ ಸಾಮಾನ್ಯ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ವಿನಯ ಕುಲಕರ್ಣಿ ಅವರು ರಾಜ್ಯದಲ್ಲಿನ ರಾಷ್ಟ್ರೀಯ ಹೆದ್ದಾರಿ-4ರಲ್ಲಿ ಮೋಟಾರು ವಾಹನ ಕಾಯ್ದೆ ಉಲ್ಲಂಘನೆಯಾಗುತ್ತಿರುವುದರಿಂದ ಮತ್ತು ರಾಷ್ಟ್ರೀಯ ಹೆದ್ದಾರಿ ದುರಸ್ತಿ ವೇಳೆಯಲ್ಲಿ ಯಾವುದೇ ಎಚ್ಚರಿಕೆ ಸೂಚನಾ ಫಲಕಗಳನ್ನು ಅಳವಡಿಸದಿರುವುದರಿಂದ ಉಂಟಾಗುತ್ತಿರುವ ಅನಾಹುತಗಳ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

2. ಶ್ರೀ ಅಶೋಕ ಖೇಣಿ ಅವರು ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ 124 ಗ್ರಾಮಗಳಲ್ಲಿ ಅಗತ್ಯ ವೈಯಕ್ತಿಕ ಶೌಚಾಲಯಗಳನ್ನು ನಿರ್ಮಿಸದಿರುವುದು ಹಾಗೂ ನೈರ್ಮಲ್ಯ ಕಾರ್ಯಕ್ರಮವನ್ನು ಚಾಲ್ತಿಯಲ್ಲಿರುವ ಕಿರುನೀರು ಸರಬರಾಜು ಯೋಜನೆಗೆ ಜೋಡಣೆ ಮಾಡದಿರುವುದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

3. ಶ್ರೀ ಡಿ. ನಾಗರಾಜಯ್ಯ ಅವರು ರಾಜ್ಯದ ಅರಣ್ಯ ಪ್ರದೇಶದಲ್ಲಿ ಜಲಸಂರಕ್ಷಣೆಗೆ ತಡೆಗೋಡೆ ನಿರ್ಮಿಸಿ ಅಂತರ್ಜಲ ವೃದ್ಧಿಸಲು ಕಾಮಗಾರಿಯನ್ನು ಕೈಗೆತ್ತಿಗೊಳ್ಳದಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

4. ಶ್ರೀ ಕೆ.ಆರ್.ನಾರಾಯಣಗೌಡ ಅವರು ಬೆಂಗಳೂರು ವೈದ್ಯಕೀಯ ಮಹಾವಿಶ್ವ ವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯು ಶುಶ್ರೂಷಕರ ಹುದ್ದೆಗಳಿಗೆ 2012ರಲ್ಲಿ ಸಂದರ್ಶನ ನಡೆದಿದ್ದರೂ ಇದುವರೆಗೂ ಆಯ್ಕೆ ಪಟ್ಟಿ ಪ್ರಕಟಿಸದಿರುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

5. ಶ್ರೀಯುತರುಗಳಾದ ಹೆಚ್.ಡಿ.ರೇವಣ್ಣ, ಎನ್.ಚಲುವರಾಯಸ್ವಾಮಿ, ಸಿ.ಎನ್.ಬಾಲಕೃಷ್ಣ, ಎಂ.ಟಿ.ಕೃಷ್ಣಪ್ಪ, ಕೆ.ಎಂ.ಶಿವಲಿಂಗೇಗೌಡ ಹಾಗೂ ಇತರರು ಬೆಂಗಳೂರು–ಹಾಸನ ರೈಲ್ವೆ ಮಾರ್ಗದ ಕಾಮಗಾರಿಗಳು ಪೂರ್ಣಗೊಳ್ಳದಿರುವ ಬಗ್ಗೆ ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

6. ಶ್ರೀ ಈ. ತುಕಾರಾಂ ಮತ್ತು ಶ್ರೀ ಬಿ.ಆರ್. ಪಾಟೀಲ್ ಅವರುಗಳು ರಾಜ್ಯದಲ್ಲಿನ ವಿವಿಧ ಜಿಲ್ಲೆಗಳ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ಶಿಕ್ಷಕರನ್ನು ಖಾಯಂ/ವಿಲೀನಗೊಳಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

7. ಶ್ರೀ ಸಿ.ಬಿ. ಸುರೇಶ್‌ಬಾಬು ಅವರು ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಕೇಂದ್ರ ಸರ್ಕಾರದ ಸ್ವಾಮ್ಯದ ಕೆಐಓಸಿಎಲ್ ರವರು ಕಬ್ಬಿಣ ಮತ್ತು ಸ್ಟೀಲ್ ಪ್ಲಾಂಟ್ ಸ್ಥಾಪಿಸಲು ಉದ್ದೇಶಿಸಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

8. ಶ್ರೀ ಯು.ಬಿ.ಬಣಕಾರ ಅವರು ಹಿರೇಕೆರೂರ ತಾಲ್ಲೂಕಿನಲ್ಲಿ ಪ್ರತಿಯೊಂದು ಗ್ರಾಮಗಳಲ್ಲಿನ ಅಂಗಡಿಗಳಲ್ಲಿ ಮದ್ಯ ಮಾರಾಟ ಮಾಡುತ್ತಿರುವ ಹಾಗೂ ಕೋಡ ಗ್ರಾಮದಲ್ಲಿ ಅಬಕಾರಿ ನಿಯಮ ಉಲ್ಲಂಘಿಸಿ ಮದ್ಯ ಮಾರಾಟ ಮಾಡುತ್ತಿರುವ ಬಗ್ಗೆ ಮಾನ್ಯ ಅಬಕಾರಿ ಸಚಿವರ ಗಮನ ಸೆಳೆಯುವುದು.

9. ಶ್ರೀ ಎಲ್. ಎ. ರವಿ ಸುಬ್ರಮಣ್ಯ ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಆಸ್ಪತ್ರೆಗಳಲ್ಲಿ ಎಂ.ಆರ್.ಐ ಯಂತ್ರದ ಸೌಲಭ್ಯಗಳು ಸಾರ್ವಜನಿಕರಿಗೆ ತುರ್ತು ಸಂದರ್ಭಗಳಲ್ಲಿ ಲಭ್ಯವಿಲ್ಲದಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

10. ಶ್ರೀ ಕೆ.ಬಿ. ಪ್ರಸನ್ನಕುಮಾರ್ ಅವರು ರಾಜ್ಯದ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಸೇವಾ ಭದ್ರತೆ ಹಾಗೂ ವೇತನ ಹೆಚ್ಚಳ ಮಾಡುವ ಬಗ್ಗೆ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

11. ಶ್ರೀ ಎ. ಮಂಜು ಅವರು ರಾಜ್ಯದ ಎಲ್ಲಾ ಪೋಲೀಸ್ ಠಾಣೆಗಳಿಗೆ ಕಿರಿಯ ಸಬ್ ಇನ್ಸ್‌ಪೆಕ್ಟರ್‌ಗಳನ್ನು ಸ್ಟೇಷನ್ ಹೆಡ್ ಆಫೀಸರ್ ಆಗಿ ನಿಯೋಜಿಸಿ ಪೋಲೀಸ್ ಕಾಯ್ದೆಯನ್ನು ಉಲ್ಲಂಘಿಸುತ್ತಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

12. ಶ್ರೀಮತಿ ಶಾರದಾ ಪೂರ್ಯ ನಾಯ್ಕ ಅವರು ಶಿವಮೊಗ್ಗ ಭದ್ರಾ ಡ್ಯಾಂ ನಿಂದ ತುಂಗಾಭದ್ರಾ ಡ್ಯಾಂಗೆ 4.00 ಟಿ.ಎಂ.ಸಿ ನೀರು ಬಿಡುವ ಬಗ್ಗೆ ಸರ್ಕಾರ ತೀರ್ಮಾನ ಕೈಗೊಂಡಿರುವ ವಿಷಯದ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

13. ಶ್ರೀ ಎಸ್. ಸುರೇಶ್‌ಕುಮಾರ್ ಅವರು ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಆಡಳಿತ ಮಂಡಳಿಯವರು ಸರ್ಕಾರಿ ನೌಕರರ ವಯೋನಿವೃತ್ತಿಯನ್ನು ನಿಗದಿಗೊಳಿಸಿ ಹೊರಡಿಸಲಾದ ಆದೇಶವನ್ನು ಜಾರಿಗೊಳಿಸದಿರುವುದು ಹಾಗೂ ಸರ್ಕಾರದ ಅನುಮತಿ ಇಲ್ಲದೇ ಸುಪ್ರೀಂ ಕೋರ್ಟ್‌ನಲ್ಲಿ ದಾವೆಯನ್ನು ಹೂಡಿರುವ ಬಗ್ಗೆ ಮಾನ್ಯ ಸಣ್ಣ ಕೈಗಾರಿಕೆಗಳು, ಮುಜರಾಯಿ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

14. ಶ್ರೀ ಭೀಮಾ ನಾಯ್ಕ ಅವರು ಗ್ರಾಮ ಮಟ್ಟದಲ್ಲಿರುವ ಗ್ರಾಮ ಪಂಚಾಯತಿಗಳ ಕಾರ್ಯನಿರ್ವಹಣೆಯನ್ನು ಸರಿಪಡಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

15. ಶ್ರೀ ಡಿ. ಸುಧಾಕರ್ ಅವರು ಹಿರಿಯೂರು ತಾಲ್ಲೂಕು ಮದ್ದಿಹಳ್ಳಿ ಗ್ರಾಮದಲ್ಲಿನ ಜನರು ಮೂಲಭೂತ ಸೌಲಭ್ಯದಿಂದ ವಂಚಿತವಾಗಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

16. ಶ್ರೀ ಜಿ.ಹೆಚ್. ತಿಪ್ಪಾರೆಡ್ಡಿ ಅವರು ಚಿತ್ರದುರ್ಗ ಜಿಲ್ಲೆಯ ಭೀಮಸಮುದ್ರದಲ್ಲಿ ಬಸ್ ನಿಲ್ದಾಣವನ್ನು ನಿರ್ಮಿಸುವ ಬಗ್ಗೆ ಸಾರಿಗೆ ಸಚಿವರ ಗಮನ ಸೆಳೆಯುವುದು.

17. ಶ್ರೀ ಸಿ.ಟಿ. ರವಿ ಅವರು 2012-13ನೇ ಸಾಲಿನಲ್ಲಿ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದ್ದ ಚಿಕ್ಕಮಗಳೂರು ಮೆಡಿಕಲ್ ಕಾಲೇಜನ್ನು ಆರಂಭಿಸುವ ಬಗ್ಗೆ ಮಾನ್ಯ ವೈದ್ಯಕೀಯ ರಾಜ್ಯ ಸಚಿವರ ಗಮನ ಸೆಳೆಯುವುದು.

6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಮಧು ಎಸ್. ಬಂಗಾರಪ್ಪ, ಎನ್.ಹೆಚ್.ಕೋನರೆಡ್ಡಿ ಬಿ.ಬಿ.ನಿಂಗಯ್ಯ, ಹಾಗೂ ಎಂ.ಟಿ.ಕೃಷ್ಣಪ್ಪ ಅವರುಗಳು ಅಡಿಕೆ ಆರೋಗ್ಯಕ್ಕೆ ಹಾನಿಕಾರಕ ಎಂದು ಕೇಂದ್ರ ಸರ್ಕಾರ ವರದಿ ಸಲ್ಲಿಸಿರುವ ಬಗ್ಗೆ ರಾಜ್ಯ ಸರ್ಕಾರವು ತೆಗೆದುಕೊಳ್ಳುವ ನಿರ್ಣಯದ ಬಗ್ಗೆ ಚರ್ಚೆ.

ಮು.ತಿ.ನೋ.,.

2. ಶ್ರೀಯುತರುಗಳಾದ ಕೆ.ಶಿವಮೂರ್ತಿ, ಕೆ.ಎಂ.ತಿಮ್ಮರಾಯಪ್ಪ, ಎಸ್.ತಿಪ್ಪೇಸ್ವಾಮಿ, ಭೀಮನಾಯ್ಕ, ರಾಜಣ್ಣ, ಈ. ತುಕಾರಾಂ ಮತ್ತು ಇತರರು ಬಯಲು ಸೀಮೆ ಪ್ರದೇಶಗಳಿಗೆ ಕುಡಿಯುವ ನೀರನ್ನು ಪೂರೈಸಲು ಕೆರೆಗಳಿಗೆ ನೀರು ತುಂಬಿಸುವ ಹಾಗೂ ನೀರಾವರಿ ಶುದ್ಧೀಕರಣ ಘಟಕವನ್ನು ಸ್ಥಾಪಿಸುವ ಬಗ್ಗೆ ಮತ್ತು ಬಯಲು ಸೀಮೆ ಪ್ರದೇಶದಿಂದ ಗುಳೆ ಹೋಗುವವರನ್ನು ತಡೆಗಟ್ಟುವ ವಿಷಯದ ಬಗ್ಗೆ ಚರ್ಚೆ.

3. ಶ್ರೀಯುತರುಗಳಾದ ಕೆ.ಬಿ.ಪ್ರಸನ್ನಕುಮಾರ, ಪ್ರಿಯಾಂಕ್ ಎಂ. ಖರ್ಗೆ ಮತ್ತು ಡಾ॥ ರಫೀಕ್ ಅಹ್ಮದ್ ಎಸ್. ಅವರುಗಳು ಶಿವಮೊಗ್ಗ ಮತ್ತು ಗುಲ್ಬರ್ಗಾ ನಗರಗಳಲ್ಲಿನ ವಿಮಾನ ನಿಲ್ದಾಣ ಕಾಮಗಾರಿ ಸ್ಥಗಿತಗೊಂಡಿರುವ ಬಗ್ಗೆ ಚರ್ಚೆ.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)